ನೆನಪೋಲೆ-2

ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

ದೂರವಾಣಿ: 080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-560001.
ದಿನಾಂಕ:06.09.2017

ಸಂಖ್ಯೆ: ಕಾಶಿಇ/ಶೈವಿ/225/ಮಾದಕ ದ್ರವ್ಯ/2013-14

ತುರ್ತು

ಇವರಿಗೆ;

**ಪ್ರಾದೇಶಿಕ ಜಂಟಿ ನಿರ್ದೇಶಕರು,**
ಕಾಲೇಜು ಶಿಕ್ಷಣ ಇಲಾಖೆ,
ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ,
ಮಂಗಳೂರು, ಧಾರವಾಡ ಮತ್ತು ಗುಲ್ಬರ್ಗಾ.

**ವಿಷಯ:** ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳು ಹಾಗೂ ಅವುಗಳನ್ನು ನಿಯಂತ್ರಿಸುವ ಕುರಿತು ಮಾಹಿತಿ ಒದಗಿಸುವ ಬಗ್ಗೆ.

**ಉಲ್ಲೇಖ:** 1) ಈ ಕಛೇರಿಯ ದಿನಾಂಕ:07.08.2017ರ ಪತ್ರ ಸಂಖ್ಯೆ:ಕಾಶಿಇ/ಶೈವಿ/16/ವಿವಿಧ ಸುತ್ತೋಲೆ/2011-12.
2) ಸರ್ಕಾರದ ಪತ್ರ ಸಂಖ್ಯೆ: ಇಡಿ 45 ವಿವಿಧ 2017, ದಿನಾಂಕ:28.08.2017.

* * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ-1ರ ಈ ಕಛೇರಿಯ ಪತ್ರದಲ್ಲಿ ಮಾದಕ ವಸ್ತುಗಳ ಸೇವನೆಯಿಂದಾಗುತ್ತಿರುವ ದುಷ್ಪರಿಣಾಮಗಳು ಹಾಗೂ ಅವುಗಳನ್ನು ನಿಯಂತ್ರಿಸುವ ಕುರಿತಂತೆ ಕ್ರಮ ಕೈಗೊಳ್ಳುವ ಸಂಬಂಧ ತಮ್ಮ ಆಡಳಿತ ವ್ಯಾಪ್ತಿಯ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ವಿದೇಶಿ ವಿದ್ಯಾರ್ಥಿಗಳು ಪ್ರವೇಶಾತಿ ಪಡೆದಿದ್ದಲ್ಲಿ ಅಂತಹವರ ಮಾಹಿತಿಯನ್ನು ನಿಗದಿತ ನಮೂನೆಯಲ್ಲಿ ಕ್ರೋಢೀಕೃತ ಮಾಹಿತಿಯನ್ನು ಕೂಡಲೇ ಸಲ್ಲಿಸುವಂತೆ ಸೂಚಿಸಲಾಗಿತ್ತು. ಆದರೆ, ಅಪೇಕ್ಷಿತ ಮಾಹಿತಿಯು ಇದುವರೆವಿಗೂ ಈ ಕಛೇರಿಯಲ್ಲಿ ಸ್ವೀಕೃತಗೊಂಡಿರುವುದಿಲ್ಲ.

ಉಲ್ಲೇಖಿತ-2ರ ಸರ್ಕಾರದ ಪತ್ರದಲ್ಲಿ ಕಾಲೇಜುಗಳ ಪ್ರಾಂಶುಪಾಲರುಗಳು ನೇರವಾಗಿ ಸರ್ಕಾರಕ್ಕೆ ಮಾಹಿತಿಯನು ಸಲ್ಲಿಸುತ್ತಿರುವುದನ್ನು ತಿಳಿಸುತ್ತಾ, ಮಾಹಿತಿ ಸಲ್ಲಿಸಲು ಈಗಾಗಲೇ ವಿಳಂಬವಾಗಿರುವ ಕಾರಣ ಕೂಡಲೇ ಅಗತ್ಯ ಕ್ರಮವಹಿಸಿ ಎಲ್ಲಾ ಕಾಲೇಜುಗಳಿಂದ ಅನುಪಾಲನಾ ವರದಿಯನ್ನು ಪಡೆದು ಪರಿಶೀಲಿಸಿ, ಕ್ರೋಢೀಕೃತ ಮಾಹಿತಿಯನ್ನು ಸರ್ಕಾರಕ್ಕೆ ಕಳುಹಿಸಿಕೊಡುವಂತೆ ಸೂಚಿಸಲಾಗಿರುತ್ತದೆ.

ಆದ್ದರಿಂದ ಈಗಾಗಲೇ ವಿಳಂಬವಾಗಿರುವ ಕಾರಣ ಕೂಡಲೇ ಅಗತ್ಯ ಕ್ರಮವಹಿಸಿ, ಉಲ್ಲೇಖಿತ-1ರ ಈ ಕಛೇರಿಯ ಪತ್ರದಲ್ಲಿ ಅಪೇಕ್ಷಿಸಿರುವಂತೆ ತಮ್ಮ ಆಡಳಿತ ವ್ಯಾಪ್ತಿಯ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳಿಂದ ಅನುಪಾಲನಾ ವರದಿಯನ್ನು ಪಡೆದು ಪರಿಶೀಲಿಸಿ, ಕ್ರೋಢೀಕೃತ ಮಾಹಿತಿಯನ್ನು ದಿನಾಂಕ:16.09.2017 ರೊಳಗಾಗಿ ಈ ಕಛೇರಿಗೆ ಸಲ್ಲಿಸುವಂತೆ ಸೂಚಿಸಲಾಗಿದೆ.

ತಮ್ಮ ವಿಶ್ವಾಸಿ,

ಕಾಲೇಜು ಶಿಕ್ಷಣ ನಿರ್ದೇಶಕರು

ಪ್ರತಿಯನ್ನು:

1) ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – *ಅಪೇಕ್ಷಿತ ಮಾಹಿತಿಯನ್ನು ಕೂಡಲೇ ಸಂಬಂಧಪಟ್ಟ ಜಂಟಿ ನಿರ್ದೇಶಕರಿಗೆ ಸಲ್ಲಿಸುವಂತೆ ಸೂಚಿಸಲಾಗಿದೆ.*
2) ಕಛೇರಿ ಪ್ರತಿ.